**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.</u>**

**<u>ಹಿರೇಕೆರೂರು.</u>**

**<u>ಸಿ.ಸಿ.ನಂಬರ್ಃ 437/2024</u>**

ಸಿಡಬ್ಲ್ಯೂಃ 1

ಪಿಡಬ್ಲ್ಯೂಃ 1

| | | |
|---|---|---|
| ಸಾಕ್ಷಿಯ ಹೆಸರು | : | ಶಹೀನ್ ಶಾ |
| ತಂದೆಯ ಹೆಸರು | : | ರಹಿಮಾನಸಾಬ್ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಹಣ್ಣಿನ ವ್ಯಾಪಾರ |
| ವಾಸಸ್ಥಳ | : | ಹಂಸಬಾವಿ |

ಇಂದು ದಿನಾಂಕಃ 06.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**<u>ಮುಖ್ಯ ವಿಚಾರಣೆಃ</u>** ಮಾನ್ಯ ಎಪಿಪಿಯವರಿಂದಃ

ಮೃತ ನಾಜೀಯಾ ಬಾನು ನನ್ನ ಅಣ್ಣಿನ ಮಗಳು. ಚಾಸಾ–2 ರಿಂದ 4 ರವರ ಪರಿಚಯ ನನಗೆ ಇರುತ್ತದೆ. ಚಾಸಾ–5 ಮತ್ತು 7 ರವರ ಪರಿಚಯ ನನಗೆ ಇರುತ್ತದೆ. ಆರೋಪಿಯ ಪರಿಚಯ ನನಗೆ ಇರುತ್ತದೆ. ಸಾಕ್ಷಿಗೆ ದೂರು ದಾಖಲೆಯನ್ನು ತೋರಿಸಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಅದನ್ನು ನಿಪಿ–1 ಎಂದು, ಸಾಕ್ಷಿಯ ಸಹಿಯನ್ನು ನಿಪಿ–1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2 ವರೆ ವರ್ಷಗಳ ಹಿಂದೆ ಹಂಸಬಾವಿ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಅಪಘಾತ ಹೇಗೆ ಆಯಿತು ಎಂದು ನನಗೆ ಮಾಹಿತಿ ಇರುವುದಿಲ್ಲ.

2. ಸಾಕ್ಷಿಗೆ ಕಡತದಲ್ಲಿರುವ ಘಟನಾ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿದ್ದು ಅದರಲ್ಲಿದ್ದ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದಾಖಲೆಯನ್ನು ನಿಪಿ–2 ಎಂದು ಸಾಕ್ಷಿಯ ಸಹಿಯನ್ನು ನಿಪಿ–2(ಎ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ ಮತ್ತು ಯಾವಾಗ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ, ಸಾಕ್ಷಿಯು ನಾನು ಅದನ್ನು ಹಂಸಬಾವಿ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಪೋಲಿಸರು ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ.

3. ಸಾಕ್ಷಿಗೆ ಕಡತದಲ್ಲಿರುವ ವಾಹನ ಜಪ್ತು ಪಂಚನಾಮೆಯನ್ನು ತೋರಿಸಲಾಗಿದ್ದು ಅದರಲ್ಲಿದ್ದ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದಾಖಲೆಯನ್ನು ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಎ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ ಮತ್ತು ಯಾವಾಗ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ, ಸಾಕ್ಷಿಯು ನಾನು ಅದನ್ನು ಹಂಸಬಾವಿ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಪೋಲಿಸರು ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ ಹಾಗೂ ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಛಾಯಾಚಿತ್ರದಲ್ಲಿ ತನ್ನನ್ನು ನೋಡಿ ಗುರುತಿಸಿಕೊಂಡಿದ್ದು ಅವುಗಳನ್ನು ನಿಪಿ-4 ರಿಂದ 8 ಎಂದು ಗುರುತಿಸಲಾಯಿತು. ಪೋಲಿಸರು ಕೋರಿಕೆಯ ಮೇರೆಗೆ ಸದರಿ ಛಾಯಾಚಿತ್ರಗಳಲ್ಲಿ ಕಾಣಿಸಿಕೊಂಡಿರುತ್ತೇನೆ. ಅಪಘಾತ ಯಾರ ತಪ್ಪಿನಿಂದ ಆಯಿತು ಎಂದು ನನಗೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ** ಮಾನ್ಯ ಎಪಿಪಿಯವರಿಂದಃ

ದಿನಾಂಕ 26-07-2023 ರಂದು ಮದ್ಯಾಹ್ನ 12.30 ಗಂಟೆಯ ಸುಮಾರಿಗೆ ನಾನು ಮನೆಯಲ್ಲಿರುವಾಗ, ಈ ಪ್ರಕರಣದ ಆರೋಪಿ ಮೋಟಾರ ಸೈಕಲ್ ನಲ್ಲಿ ಮೃತ ವ್ಯಕ್ತಿಯನ್ನು ಹಿಂದೆ ಕೂರಿಸಿಕೊಂಡು ಹಂಸಬಾವಿಯ ಬಳಗನೂರ ಚಾಳದ ಹತ್ತಿರ ಬರುತ್ತಿರುವಾಗ, ಮೋಟಾರ ಸೈಕಲ್ ನ್ನು ಸ್ಕಿಡ್ ಆಗಿದ್ದು, ಆ ಪರಿಣಾಮ ಆರೋಪಿ, ಮೃತ ವ್ಯಕ್ತಿ, ಮೋಟಾರ ಸೈಕಲ್ ಫುಟ್ ಪಾತ್ ಮೇಲೆ ಬಿದ್ದಿರುತ್ತವೆ ಎಂದರೆ ಸರಿಯಲ್ಲ. ನಾನು ನೋಡಿದಾಗ ಮೃತ ವ್ಯಕ್ತಿ ಪ್ರಜ್ಞಾ ಹೀನಸ್ಥಿತಿಯಲ್ಲಿ ಬಿದಿದ್ದರು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ-5 ರವರು ಮೃತ ವ್ಯಕ್ತಿಯನ್ನು ನೋಡಿದಾಗ ತಲೆಗೆ ಜಿಜ್ಜಿ ಹೊಡೆತ ಬಿದಿದ್ದು , ನಂತರ ಆಕೆಯನ್ನು ಉಪಚರಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ಆಕೆಯನ್ನು ಹಂಸಬಾವಿ ಸರಕಾರಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿರತ್ತೇವೆ ಎಂದರೆ ಸರಿಯಲ್ಲ. ನಂತರ ಆಕೆಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಹಾವೇರಿಗೆ ಕುಳಹಿಸಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ನಂತರ ಹಾವೇರಿಯಿಂದ ಹುಬ್ಬಳಿ ಸಂಜೀವಿನಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ನಂತರ ದಿನಾಂಕ 31-07-2023 ರಂದು ಆಕೆ ಮೃತ ಪಟ್ಟಿರುವ ವಿಚಾರ ನನಗೆ ಗೊತ್ತಿರುತ್ತದೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ದಿನಾಂಕ 31-07-2023 ರಂದು ಠಾಣೆಗೆ ಹಾಜರಾಗಿ ನಿಪಿ೦1 ರಂತೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಂತರ ಮಾರನೇಯ ದಿನ ಪೋಲಿಸರು ಕೃತ್ಯ ಸ್ಥಳಕ್ಕೆ ಬೇಟಿ ನಿಡಿದ್ದು ನಾನು ತೋರಿಸಿದ ಜಾಗದಲ್ಲಿ ಬೆಳಿಗ್ಗೆ 10.15 ರಿಂದ 11.15 ರವರೆಗೆ ಪಂಚನಾಮೆಯನ್ನು ಮಾಡಿ ಆ ಕಾಲಕ್ಕೆ ನಿಪಿ-4 ರಿಂದ 8 ರಂತೆ

ಛಾಯಾಚಿತ್ರವನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಅದೇ ದಿನ ಅಪಘಾತದಲ್ಲಿ ಭಾಗೀಯಾದ ವಾಹನವನ್ನು ಹಂಸಬಾವಿ ಪೋಲಿಸ್ ಠಾಣೆಯ ಆವರಣದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ನಿಪಿ-3 ರಂತೆ ಜಪ್ತು ಪಂಚನಾಮೆಯನ್ನು ಬೆಳಿಗ್ಗೆ 11.30 ರಿಂದ 12.30 ರವರೆಗೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಿಂದ 3 ರಲ್ಲಿ ನಮೂದಿಸಿರುವ ಅಂಶಗಳ ಬಗ್ಗೆ ನನಗೆ ಮಾಹಿತಿ ಇದ್ದರೂ ಕೂಡ ಇಲ್ಲ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ ಬಿ ಎನ್ ಬಿ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.

<u>**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.**</u>

<u>**ಹಿರೇಕೆರೂರು.**</u>

<u>**ಸಿ.ಸಿ.ನಂಬರ್ಃ 437/2024**</u>

ಸಿಡಬ್ಲ್ಯೂಃ 2

ಪಿಡಬ್ಲ್ಯೂಃ 2

| | | |
|---|---|---|
| ಸಾಕ್ಷಿಯ ಹೆಸರು | : | ಜಫ್ರುಲ್ಲಾ |
| ತಂದೆಯ ಹೆಸರು | : | ದಾದಾಪೀರ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ವೆಲ್ಡಿಂಗ್ ಕೆಲಸ |
| ವಾಸಸ್ಥಳ | : | ಹಂಸಬಾವಿ |

ಇಂದು ದಿನಾಂಕಃ 06.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

<u>**ಮುಖ್ಯ ವಿಚಾರಣೆಃ**</u> ಮಾನ್ಯ ಎಪಿಪಿಯವರಿಂದಃ

ಚಾಸಾ-1 ಮತ್ತು 3 ರವರ ಪರಿಚಯ ನನಗೆ ಇರುತ್ತೆ. ಸಾಕ್ಷಿಗೆ ಕಡತದಲ್ಲಿರುವ ಘಟನಾ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿದ್ದು ಅದರಲ್ಲಿದ್ದ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಮೇರೆಗೆ ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಬಿ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ ಮತ್ತು ಯಾವಾಗ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ, ಸಾಕ್ಷಿಯು ನಾನು ಅದನ್ನು ಹಂಸಬಾವಿ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಪೋಲಿಸರು ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ.

2. ಸಾಕ್ಷಿಗೆ ಕಡತದಲ್ಲಿರುವ ವಾಹನ ಜಪ್ತು ಪಂಚನಾಮೆಯನ್ನು ತೋರಿಸಲಾಗಿದ್ದು ಅದರಲ್ಲಿದ್ದ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಬಿ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ ಮತ್ತು ಯಾವಾಗ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ, ಸಾಕ್ಷಿಯು ನಾನು ಅದನ್ನು ಹಂಸಬಾವಿ ಪೋಲಿಸ್ ಠಾಣೆಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಪೋಲಿಸರು ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿರುವುದಿಲ್ಲ ಹಾಗೂ ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಛಾಯಾಚಿತ್ರದಲ್ಲಿ ತನ್ನನ್ನು ನೋಡಿ ಗುರುತಿಸಿಕೊಂಡಿದ್ದು ಅವುಗಳನ್ನು ಈಗಾಗಲೇ ನಿಪಿ-4 ರಿಂದ 8 ಎಂದು ಗುರುತಿಸಲಾಯಿತು. ಪೋಲಿಸರು

ಕೋರಿಕೆಯ ಮೇರೆಗೆ ಸದರಿ ಛಾಯಾಚಿತ್ರಗಳಲ್ಲಿ ಕಾಣಿಸಿಕೊಂಡಿರುತ್ತೇನೆ. ಅಪಘಾತ ಯಾರ ತಪ್ಪಿನಿಂದ ಆಯಿತು ಎಂದು ನನಗೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>** ಮಾನ್ಯ ಎಪಿಪಿಯವರಿಂದಃ

ಅಪಘಾತವಾದ ಮಾರನೇಯ ದಿನ ಪೋಲಿಸರು ಕೃತ್ಯ ಸ್ಥಳಕ್ಕೆ ಬೇಟಿ ನೀಡಿದ್ದು, ಚಾಸಾ-1 ರವರು ತೋರಿಸಿದ ಜಾಗದಲ್ಲಿ ಬೆಳಿಗ್ಗೆ 10.15 ರಿಂದ 11.15 ರವರೆಗೆ ಪಂಚನಾಮೆಯನ್ನು ಮಾಡಿ ಆ ಕಾಲಕ್ಕೆ ನಿಪಿ-4 ರಿಂದ 8 ರಂತೆ ಛಾಯಾಚಿತ್ರವನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಅದೇ ದಿನ ಅಪಘಾತದಲ್ಲಿ ಭಾಗೀಯಾದ ವಾಹನವನ್ನು ಹಂಸಬಾವಿ ಪೋಲಿಸ್ ಠಾಣೆಯ ಆವರಣದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮದಲ್ಲಿ ನಿಪಿ-3 ರಂತೆ ಜಪ್ತು ಪಂಚನಾಮೆಯನ್ನು ಬೆಳಿಗ್ಗೆ 11.30 ರಿಂದ 12.30 ರವರೆಗೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ಮತ್ತು 3 ರಲ್ಲಿ ನಮೂದಿಸಿರುವ ಅಂಶಗಳ ಬಗ್ಗೆ ನನಗೆ ಮಾಹಿತಿ ಇದ್ದರೂ ಕೂಡ ಇಲ್ಲ ಎಂದು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** ಆರೋಪಿ ಪರ ಶ್ರೀ ಬಿ ಎನ್ ಬಿ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.

**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.</u>**

**<u>ಹಿರೇಕೆರೂರು.</u>**

**<u>ಸಿ.ಸಿ.ನಂಬರ್ಃ 437/2024</u>**

ಸಿಡಬ್ಲ್ಯೂಃ 5

ಪಿಡಬ್ಲ್ಯೂಃ 3

| | | |
|---|---|---|
| ಸಾಕ್ಷಿಯ ಹೆಸರು | : | ರಹಮತ್‌ವುಲ್ಲಾ |
| ತಂದೆಯ ಹೆಸರು | : | ಗುಲಾಮ ಮಹಮ್ಮದ್ |
| ವಯಸ್ಸು | : | 31 ವರ್ಷ |
| ಉದ್ಯೋಗ | : | ಹಿಟ್ಟಿನ ಗಿರಣಿ |
| ವಾಸಸ್ಥಳ | : | ಹಂಸಬಾವಿ |

ಇಂದು ದಿನಾಂಕಃ 06.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**<u>ಮುಖ್ಯ ವಿಚಾರಣೆಃ</u>** ಮಾನ್ಯ ಎಪಿಪಿಯವರಿಂದಃ

ಮೃತ ವ್ಯಕ್ತಿ ಯಾರು ಎಂದು ನನಗೆ ಗೊತ್ತಿರುವುದಿಲ್ಲ. ಆದರೆ ಆಕೆ ಮೃತ ಪಟ್ರಿರುವುದು ನನಗೆ ಗುತ್ತಿರುತತದೆ. ಚಾಸಾ-1 ಮತ್ತು ಆರೋಪಿಯ ಪರಿಚರ ನನಗೆ ಇರುತ್ತದೆ. ಅಪಘಾತವನ್ನು ನಾನು ನೋಡಿರುವುದಿಲ್ಲ ಹಾಗೂ ಅಪಘಾತದ ಬಗೆಗ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ ಹಾಗೂ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಅಪಘಾತ ಯಾರ ತಪ್ಪಿನಿಂದ ಆಯಿತು ಎಂದು ನನಗೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>** ಮಾನ್ಯ ಎಪಿಪಿಯವರಿಂದಃ

ದಿನಾಂಕ 26-07-2023 ರಂದು ಮದ್ಯಾಹ್ನ 12.30 ಸುಮಾರಿಗೆ ನಾನು ಹಿಟ್ಟಿನ ಗಿರಣಿಯಲ್ಲಿ ಇದ್ದಾಗ ಆರೋಪಿ ಮೋಟಾರ ಸೈಕಲ್ ನಲ್ಲಿ ಮೃತ ಮಹಿಳೆಯನ್ನು ಕೂರಿಸಿಕೊಂಡು ಹಂಸಬಾವಿ ಗ್ರಾಮದ ಬಳಗಾನೂರ ಚಾಳದ ಕಡೆಯಿಂದ ಬರುತ್ತಿರುವಾಗ, ಫುಟ್ ಪಾತ್ ನ ಬಳಿ ಅಜಾಗರೂಕತೆಯಿಂದ ಸ್ಕಿಡ್ ಮಾಡಿದ್ದು, ಆಗ ಬೈಕಲ್ ಆರೋಪಿ ಹಾಗೂ ಮೃತ ಮಹಿಳೆ ಪುಟ್ ಪಾತ್ ಮೇಲೆ ಬಿದಿರುತ್ತಾರೆ ಎಂದರೆ ಸರಿಯಲ್ಲ. ಅ ಪರಿಣಾವ ಮೃತ ಮಹಿಳೆಗೆ ತಲೆಗೆ ತೀವ್ರ ಗಾಯಗೊಂಡಿದ್ದು, ನಾನು ಚಾಸಾ-1 ರವರನ್ನು ಉಪಚರಿಸಿ ನೋಡಲಾಗಿ, ತಲೆಗೆ ಹೊಡೆತ ಬಿದ್ದು ಪ್ರಜ್ಞೆ ತಪ್ಪಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆಕೆಯನ್ನು ಹಂಸಬಾವಿ ಆಸ್ಪತ್ರೆಗೆ

ಕಳುಹಿಸಿಕೊಡಲಾಯಿತು ಎಂದರೆ ಸರಿಯಲ್ಲ. ನಂತರ ಅಲ್ಲಿಂದ ಹಾವೇರಿ ಆಸ್ಪತ್ರೆಗೆ



ಕಳುಹಿಸಿಕೊಡಲಾಗಿರುತ್ತದೆ ಎಂದರೆ ಸರಿಯಲ್ಲ. ನಂತರ ಅಲ್ಲಿಂದ ಹುಬ್ಬಳ್ಳಿ ಸಂಜೀವಿನಿ ಆಸ್ಪತ್ರೆಗೆ ಕಳುಹಿಸಿಕೊಡಲಾಗಿರುತ್ತದೆ ಎಂದರೆ ಸರಿಯಲ್ಲ. ನಂತರ ಆಕೆಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ದಿನಾಂಕ 31-07-2023 ರಂದು ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಂತರ ದಿನಾಂಕ 01-08-2023 ರಂದು ನಾನು ಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ ಬಿ ಎನ್ ಬಿ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.